# ಆಸ್ಟ್ರೇಲಿಯಾದಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಣೆ

ವರದಿ: ವಿಜಯಕುಮಾರ್ ಹಲಗಲಿ

ಆಸ್ಟ್ರೇಲಿಯಾ ದೇಶದ ಸುಂದರ ನಗರ ಸಿಡ್ನಿಯಲ್ಲಿ ಇತ್ತೀಚೆಗೆ ರಾಜ್ಯೋತ್ಸವ ಮತ್ತು ಮಕ್ಕಳ ದಿನಾಚರಣೆಯನ್ನು ಸಿಡ್ನಿ ಕನ್ನಡ ಸಂಘದ ಆಶ್ರಯದಲ್ಲಿ ಆಚರಿಸಲಾಯಿತು.

ಶನಿವಾರ ದಿ: ೫ ನವೆಂಬರ್ ೨೦೧೧ ರಂದು ನಡೆದ ಈ ಸಮಾರಂಭದಲ್ಲಿ ಮುಖ್ಯ ಅಥಿತಿಗಳಾಗಿ ಕರ್ನಾಟಕದಿಂದ ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆಯ ಸಚಿವರಾದ ಸನ್ಮಾನ್ಯ ಗೋವಿಂದ ಕಾರಜೋಳ ಅವರು ಭಾಗವಹಿಸಿದ್ದರು.

ಸಮಾರಂಭದ ಅಂಗವಾಗಿ ಸ್ಥಳೀಯ ಕನ್ನಡಿಗ ಮಕ್ಕಳು ಮತ್ತು ಕಲಾವಿದರಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಲಾಯಿತು. ಸಮಾರಂಭದ ಮುಖ್ಯ ಆಕರ್ಷಣೆಯಾಗಿ ಕನ್ನಡದ ಪ್ರಸಿದ್ಧ ಹಿನ್ನೆಲೆ ಗಾಯಕಿ ಫಿಲಂ ಫೇರ್ ಪ್ರಶಸ್ತಿ ವಿಜೇತೆ ಡಾ: ಶಮಿತಾ ಮಲ್ನಾಡ್ ಅವರು ತಮ್ಮ ಸುಮಧುರ ಕಂಠದಿಂದ ನೆರೆದ ಕನ್ನಡಿಗರ ಮನತಣಿಸಿದರು.

ಸ್ಥಳೀಯ ರಾಜ್ಯ ಸರಕಾರದ ಮೇಲ್ಮನೆಯ ಸ್ಪೀಕರ್ ಶ್ರೀಮತಿ: ಅಮಂಡಾ ಫಾರ್ಝಿಯೋ, ಬೆಂಗಳೂರಿನ ಉದ್ಯಮಿ ಶ್ರೀ: ಎಮ್. ಎಸ್. ಆರ್. ಆರಾಧ್ಯ ಹಾಗೂ ಬೆಂಗಳೂರಿನ ಸರ್ಪಭೂಷಣ ಮಠದ ಶ್ರೀಗಳಾದ ಮಲ್ಲಿಕಾರ್ಜುನ ದೇವರು ಇವರುಗಳು ಸಮಾರಂಭದಲ್ಲಿ ಭಾಗವಹಿಸಿದ್ದರು.

ಸಿಡ್ನಿ ಕನ್ನಡ ಸಂಘದ ಅಧ್ಯಕ್ಷ ಡಾ: ಸಿದ್ದಲಿಂಗೇಶ್ವರ ಓರೆಕೊಂಡಿಯವರು ನೆರೆದ ಅಥಿತಿಗಳು ಮತ್ತು ಸಭಿಕರನ್ನು ಸ್ವಾಗತಿಸಿದರು ಮತ್ತು ಶ್ರೀಮತಿ: ಶುಭಶ್ರೀ ರವಿ ಅವರು ಕಾರ್ಯಕ್ರಮ ನಿರೂಪಿಸಿದರು.

